# ಮಹಿಳೆಯರ ಪ್ರಗತಿ ಗುರುತಿಸಿ



ದೊಡ್ಡಬಳ್ಳಾಪುರ: ಮಹಿಳಾ ದಿನಾಚರಣೆ ಆಚರಿಸುವ ಮೂಲಕ ಮಹಿಳೆಯ ಪ್ರಗತಿಯನ್ನು ಗುರುತಿಸುತ್ತಿರುವುದು ಸಂತಸದ ವಿಷಯ. ಮಹಿಳೆಯರು ಸಮಾಜದ ಮುಖ್ಯವಾಹಿನಿಗೆ ಬರಬೇಕು ಎಂದು ಬಾಶೆಟ್ಟಿಹಳ್ಳಿ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಕುಮಾರ್ ಹೇಳಿದರು.

ತಾಲ್ಲೂಕಿನ ಬಾಶೆಟ್ಟಿಹಳ್ಳಿ ಅಂಗನವಾಡಿ ಮಾದರಿ ಕಲಿಕಾ ಕೇಂದ್ರದಲ್ಲಿ ಮಕ್ಕಳ ಜಾಗೃತಿ ಸಂಸ್ಥೆ ವತಿಯಿಂದ ನಡೆದ 'ಮಹಿಳಾ ದಿನಾಚರಣೆ' ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

'ಪ್ರತಿಯೊಂದು ಕುಟುಂಬದಲ್ಲೂ ಮಹಿಳೆಯ ಅಗತ್ಯ ಎಷ್ಟು ಎಂಬುದು ಗೊತ್ತಿರುತ್ತದೆ. ಮಹಿಳೆಯರಿಗೆ ಆಗುತ್ತಿದ್ದ ಅನ್ಯಾಯ, ಸಾಮಾಜಿಕ ಶೋಷಣೆ, ಸಮಾನತೆಗೆ ಮತ್ತು ಶಿಕ್ಷಣ ದೊರೆಯುವಂತಾಗಲು ಹಲವಾರು ಮಹನೀಯರು ನಿರಂತರ ಹೋರಾಟ ಮಾಡಿದ್ದಾರೆ. ಇಂತಹವರ ಉದ್ದೇಶಗಳನ್ನು ನಾವು ಸ್ಮರಿಸಬೇಕು' ಎಂದರು.

ಬಾಶೆಟ್ಟಿಹಳ್ಳಿ ಗ್ರಾಮ ಪಂಚಾಯಿತಿ ಸದಸ್ಯ ಬಿ.ಕೃಷ್ಣಪ್ಪ ಮಾತನಾಡಿ, ಮಹಿಳೆಯರು ಎಲ್ಲ ಕ್ಷೇತ್ರಗಳಲ್ಲಿಯೂ ಸಾಧನೆ ಮಾಡುತ್ತಿರುವುದು ಹೆಮ್ಮೆಯ ಸಂಗತಿಯಾಗಿದೆ. ಹೆಣ್ಣನ್ನು ದೇವರಿಗೆ ಸಮ ಎಂದು ಹೇಳುತ್ತಲೇ ಆಕೆಯನ್ನು ನಿರಂತರವಾಗಿ ಶೋಷಣೆ ಮಾಡುವುದು ಶೋಭೆ ತರುವ ವಿಚಾರ ಅಲ್ಲ ಎಂದರು.

ಮಕ್ಕಳ ಜಾಗೃತಿ ಸಂಸ್ಥೆಯ ಸಂಚಾಲಕ ಹನುಮಂತ್ ಮಾತನಾಡಿ, ಅಮೆರಿಕದಲ್ಲಿ ಮಹಿಳೆಯರಿಗೆ ತೋರುತ್ತಿದ್ದ ತಾರತಮ್ಯದ ವಿರುದ್ಧ ಸಿಡಿದೆದ್ದ ಮಹಿಳೆಯರು 1910 ರಲ್ಲಿ ಅಂತರರಾಷ್ಟ್ರೀಯ ಮಹಿಳಾ ಸಮ್ಮೇಳನವನ್ನು ಏರ್ಪಡಿಸಿ, ಮಹಿಳಾ ದಿನ ಆಚರಿಸಲು ತೀರ್ಮಾನಿಸಲಾಯಿತು. ಪ್ರಪಂಚದಲ್ಲಿ ಮಹಿಳೆಯರಿಗೆ ಸಮಾಜದಲ್ಲಿ ಸಮಾನ ಹಕ್ಕುಗಳು ದೊರೆಯುವಂತಾಗಬೇಕು ಎನ್ನುವ ಆಶಯಗಳು ಈಡೇರಬೇಕಿದೆ ಎಂದರು.

ಕಾರ್ಯಕ್ರಮದಲ್ಲಿ ಬಾಶೆಟ್ಟಿಹಳ್ಳಿ ಗ್ರಾಮ ಪಂಚಾಯಿತಿ ಅಧ್ಯಕ್ಷೆ ನಾರಾಯಣಮ್ಮ, ಉಪಾಧ್ಯಕ್ಷೆ ಶಿಲ್ಪ, ಗ್ರಾಮ ಪಂಚಾಯಿತಿ ಸದಸ್ಯರಾದ ರಾಧಾಮಣಿ, ನೇತ್ರಾವತಿ, ಸಿದ್ದಪ್ಪ, ಮುನಿರಾಜು, ರೂಪ, ರತ್ನಮ್ಮ, ಅಂಬರೀಷ್, ಬೋರಲಿಂಗಯ್ಯ, ರಾಧಾಮಣಿ, ಮಕ್ಕಳ ಜಾಗೃತಿ ಸಂಸ್ಥೆಯ ಆಂಥೋನಿ ಹಾಗೂ ಅಂಗನವಾಡಿ ಶಿಕ್ಷಕರು, ಸಂಸ್ಥೆಗಳ ಪದಾಧಿಕಾರಿಗಳು ಭಾಗವಹಿಸಿದ್ದರು.